ಅವಶ್ಯಕತೆಗೆ ಅನುಗುಣವಾಗಿ ಹಂತ ಹಂತವಾಗಿ ಮೂಲಭೂತ ಸೌಲಭ್ಯ ಒದಗಿಸಲು ಕ್ರಮ ಕೈಗೊಳ್ಳಲಾಗುವುದು.

ಬೆಳ್ತಂಗಡಿ ತಾಲ್ಲೂಕಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯವನ್ನು ಮಂಜೂರು ಮಾಡುವುದು.

1970(1913)

ಶ್ರೀ ಪ್ರಭಾಕರ ಬಂಗೇರ .ಕೆ (ಬೆಳ್ತಂಗಡಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕಿನ ಬೆಳ್ತಂಗಡಿಯಲ್ಲಿ ಮೆಟ್ರಿಕ್ ನಂತರ ಬಿ.ಸಿ.ಎಂ. (ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ) ವಿದ್ಯಾರ್ಥಿನಿಲಯದ ಅವಶ್ಯಕತೆಯಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಹಾಗಾದಲ್ಲಿ ಹುಡುಗರ ವಿದ್ಯಾರ್ಥಿ ನಿಲಯವನ್ನು ಯಾವಾಗಿನಿಂದ ಪ್ರಾರಂಭ ಮಾಡಲಾಗುವುದು.

ಆ) ಬೆಳ್ತಂಗಡಿ ತಾಲ್ಲೂಕಿನ ಮಡ್ಯಂತಾರು ಎಂಬಲ್ಲಿ ನಡೆಸಲ್ಪಡುವ ವಿದ್ಯಾರ್ಥಿನಿಲಯಕ್ಕೆ ಕಟ್ಟಡ ಇಲ್ಲದೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಹಾಗಿದ್ದಲ್ಲಿ ಕಟ್ಟಡ ಕಾಮಗಾರಿಗೆ ಸೂಕ್ತ ಕ್ರಮವನ್ನು ಸಕಾಲದಲ್ಲಿ ಕೈಗೊಳ್ಳಲು ಸರ್ಕಾರ ನಿಶ್ಚಯಿಸಿದೆಯೇ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಹೌದು, ಪರಿಶೀಲಿಸಲಾಗುವುದು.

ಆ) ಇಲ್ಲ.

ಸದರಿ ಸ್ಥಳದಲ್ಲಿ ಗ್ರಾಮ ಪಂಚಾಯಿತಿಯ ಕಟ್ಟಡದಲ್ಲಿ ವಿದ್ಯಾರ್ಥಿನಿಲಯವನ್ನು ನಡೆಸಲಾಗುತ್ತಿದೆ. ಇಲ್ಲಿ ಯಾವುದೇ ಅನಾನುಕೂಲತೆ ಇರುವುದಿಲ್ಲ.

ಕೃಷಿಗ್ಯಾನೇಕಾರರಿಗೆ ಕೇಂದ್ರ ವಲಯ ಯೋಜನೆ.

1971(2052)